Government of Karnataka

Deposition Sheet Form No. R.P. 57

ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಲಿಂಗಸಗೂರ

ಸಿ.ಸಿ ನಂಬರ 2197/2024

ಸಿ ಡಬ್ಲ್ಯೂ-2
ಪಿ ಡಬ್ಲ್ಯೂ-1

| | | |
|---|---|---|
| ಸಾಕ್ಷಿದಾರರ ಹೆಸರು | ಃ- | ಶಿವರಾಜ |
| ತಂದೆಯ ಹೆಸರು | ಃ- | ಬಸವರಾಜ |
| ವಯಸ್ಸು | ಃ- | 26 ವರ್ಷ |
| ಉದ್ಯೋಗ | ಃ- | ಒಕ್ಕಲುತನ |
| ವಾಸಸ್ಥಳ | ಃ- | ಯರಗುಂಟಿ |

ದಿ.20-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಭೋದಿಸಲಾಯಿತು.

***ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ.***

ಚಾ.ಸಾ-1 ರವರ ಪರಿಚಯ ಇಲ್ಲ. ಚಾ.ಸಾ-3 ರವರ ಪರಿಚಯ ಇದೆ. ಸುಮಾರು ಒಂದುವರೆ ವರ್ಷದ ಹಿಂದೆ ಪೋಲಿಸರು ಊರಿಗೆ ಬಂದಾಗ ಒಂದು ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ಸಾಕ್ಷಿ ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿ.ಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-1(ಎ) ಎಂದು ಗುರುತಿಸಲಾಯಿತು. ನಮ್ಮ ಸಮಕ್ಷಮ ಘಟನಾ ಸ್ಥಳದಲ್ಲಿ ಯಾವುದೇ ಪಂಚನಾಮೆ ಮಾಡಿಲ್ಲ. ಸಾಕ್ಷಿಯು ಪೋಟೋವನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ-2 ಎಂದು ಗುರುತಿಸಲಾಯಿತು. ನಿ.ಪಿ-1 ರಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ.

**(ಮಾನ್ಯ ಎಪಿಪಿ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೇಳಿರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಎಪಿಪಿ ಅವರಿಂದ**

ದಿನಾಂಕ 29-06-2024 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ-3 ರವರನ್ನು ಪೋಲಿಸರು ಕರೆಯಿಸಿದ ಮೇರೆಗೆ ಚಾ.ಸಾ-1 ರವರು ತೋರಿಸಿದ ಸ್ಥಳ ಆರೋಪಿಯ ಮನೆಯ ಮುಂದೆ ಪೋಲಿಸರು ಬೆಳಿಗ್ಗೆ 9-30 ರಿಂದ 10-30 ವರೆಗೆ ನಿ.ಪಿ-1 ರಂತೆ ಪಂಚನಾಮೆ ಮಾಡಿ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಪೋಲಿಸರ ಹೇಳಿಕೆಯ ಮೇರೆಗೆ ನಿ.ಪಿ-2 ರ ಪೋಟೋದಲ್ಲಿ ನಿಂತಿರುತ್ತೇವೆ. ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ನನಗೆ ಗೊತ್ತಿಲ್ಲ. ನಿ.ಪಿ-2 ರಲ್ಲಿರುವ ವಿಷಯ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೆಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಶ್ರೀ ಎಸ್.ಜಿ.ಪಿ ವಕೀಲರಿಂದಃ</u>**

ಏನೂ ಇಲ್ಲ.

<u>ಮರು ವಿಚಾರಣೆ ಃ</u>

ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

**ಓ. ಹೇ. ಕೇ. ಸರಿ ಇದೆ**

ಸಹಿ/-

ಪ್ರಧಾನ ಸಿವಿಲ. ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ಲಿಂಗಸುಗೂರು.